ಶ್ರೀ ಕೆ. ಎಂ. ಕೃಷ್ಣಾರೆಡ್ಡಿ : ಮಾನ್ಯ ಅಧ್ಯಕ್ಷರೆ, ತಿಳಿಸಿರುವ ಅವಧಿಯೊಳಗೆ ಕೆಲಸ ಮಾಡಿಸಿಕೊಡಲಾಗುತ್ತದೆಂದು ಮಾನ್ಯ ಸದಸ್ಯರಿಗೆ ನಾನು ಆಶ್ವಾಸನೆಯನ್ನು ಕೊಡುತ್ತೇನೆ.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಸಿ. ಭೈರೇಗೌಡ (ಕೃಷಿ ಸಚಿವರು) : ಮಾನ್ಯ ಉಪಾಧ್ಯಕ್ಷರೆ, 16ನೇ ಪಟ್ಟಿಯಲ್ಲಿರುವ 83 ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪೈಕಿ 70 ಪ್ರಶ್ನೆಗಳಿಗೆ ಉತ್ತರವನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ವಿಷಯ : ಭದ್ರವತಿಯ ವಿ.ಐ.ಎಸ್.ಎಲ್. ಹಸ್ತಾಂತರ

1399 (1944)-ಶ್ರೀ ಆಯನೂರು ಮಂಜುನಾಥ (ಹೊಸನಗರ) : ಮಾನ್ಯ ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಹಾಗೂ ಸಂಪನ್ಮೂಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಭದ್ರಾವತಿಯ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಸ್ಟೀಲ್ ನಿಯಮಿತ ಕಬ್ಬಿಣ ಕಾರ್ಖಾನೆಯನ್ನು ಭಾರತ ಉಕ್ಕು ಪ್ರಾಧಿಕಾರ ನಿಯಮಿತದವರಿಗೆ ಸಂಪೂರ್ಣವಾಗಿ ಹಸ್ತಾಂತರಿಸಲು ರಾಜ್ಯ ಸರ್ಕಾರದಿಂದ ನಿರ್ಧರಿಸಲಾಗಿದೆಯೇ

ಆ) ಹಾಗಿದ್ದಲ್ಲಿ, ಹಸ್ತಾಂತರದ ಪ್ರಕ್ರಿಯೆಯು ಯಾವ ಹಂತದಲ್ಲಿದೆ, ಯಾವಾಗ ಈ ಕೆಲಸ ಪೂರ್ಣಗೊಳ್ಳುವುದು?

ಶ್ರೀ ಆರ್. ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಹಾಗೂ ಸಂಪನ್ಮೂಲ ಅಭಿವೃದ್ಧಿ ಸಚಿವರು)

ಅ) ಹೌದು.

ಆ) ಈ ಬಗ್ಗೆ ರಾಜ್ಯ ಸರ್ಕಾರವು ಈ ವಿಷಯದಲ್ಲಿ ಭಾರತ ಸರ್ಕಾರ ವಿ.ಐ.ಎಸ್.ಎಲ್. ಮತ್ತು ಭಾರತ ಉಕ್ಕು ಪ್ರಾಧಿಕಾರ ನಿಯಮಿತಗೊಂಡಿದೆ. ಒಂದು ಒಡಂಬಡಿಕೆ ಮಾಡಿಕೊಳ್ಳಲು ಉದ್ದೇಶಿಸಿದ್ದು, ಒಡಂಬಡಿಕೆ ಆದ ತಕ್ಷಣ ಹಸ್ತಾಂತರದಿಂದ ವಿಧಾನ ಪೂರ್ಣಗೊಳಿಸಲಗುವುದು.